RNU AIR DHARWAD

**JULY 16, 2025**

**AKASHAVANI - DHARWAD**

**PRADESH SAAMACHARA (KANNADA) 7.05 A.M**

**ಮುಖ್ಯಾಂಶಗಳು**

- **‘ಕೃಷಿ ಸೇವಾ ಕೇಂದ್ರ’ ಯೋಜನೆ: ಕೃಷಿಯ ಉತ್ಪಾದಕತೆ ಮತ್ತು ಸುಸ್ಥಿರತೆ ಹೆಚ್ಚಿಸಲು ಸಹಕಾರಿ.**
- **ಕರ್ನಾಟಕ ವಸತಿ ಗೃಹಗಳ ಕಟ್ಟಡದ ನಿರ್ವಹಣೆಯ ಉಸ್ತುವಾರಿ ಪ್ರವಾಸೋದ್ಯಮ ಇಲಾಖೆಗೆ ವಹಿಸುವ ಕುರಿತು ಪ್ರವಾಸೋದ್ಯಮ ಸಚಿವರೊಂದಿಗೆ ಚರ್ಚೆ.**
- **ಪಿ.ಎಂ. ಉಷಾ ಯೋಜನೆ: ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಚಾಲನೆ.**
- **ಇಂದು ವಿಶ್ವ ಉರಗಗಳ ದಿನಾಚರಣೆ.**

**ಈಗ ವಾರ್ತೆಗಳ ವಿವರ**

**ಕರ್ನಾಟಕವು ಕೃಷಿ ಕ್ಷೇತ್ರದಲ್ಲಿ ತಂತ್ರಜ್ಞಾನದ ಅಳವಡಿಕೆಯೊಂದಿಗೆ ಅತ್ಯಾಧುನಿಕ ಕೃಷಿ** ಪದ್ಧತಿಗಳನ್ನು ಪರಿಚಯಿಸುವ ಮೂಲಕ ದೇಶದಲ್ಲಿ ಮಾದರಿಯಾಗಿ ಮುನ್ನಡೆಯುತ್ತಿದೆ ಎಂದು ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ‘ಕೃಷಿ ಸೇವಾ ಕೇಂದ್ರ’ ಯೋಜನೆಯು ರೈತರಿಗೆ ಆಧುನಿಕ ಸೌಲಭ್ಯಗಳನ್ನು ಒದಗಿಸಿ, ಕೃಷಿಯ ಉತ್ಪಾದಕತೆ ಮತ್ತು ಸುಸ್ಥಿರತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ. ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಆಧರಿಸಿ ಕಾರ್ಯ ನಿರ್ವಹಿಸಲಿರುವ ಈ ಕೇಂದ್ರಗಳ ಮೂಲಕ, ಆಯಾ ಪ್ರದೇಶದ ಮಣ್ಣಿನ ಮಾದರಿ, ಹವಾಗುಣ, ತೇವಾಂಶ, ಮಳೆಯ ಪ್ರಮಾಣದೊಂದಿಗೆ ಪ್ರಸ್ತುತ ಇರುವ ಬೆಳೆ ಪದ್ಧತಿ ಮತ್ತು ಇಳುವರಿಯ ವಿಶ್ಲೇಷಣೆ ನಡೆಯಲಿದೆ. ಈ ವಿಶ್ಲೇಷಣೆಯು ರಾಜ್ಯದ ರೈತರು ಹಾಗೂ ಕೃಷಿ ನೀತಿ ನಿರೂಪಕರಿಗೆ ನೆರವಾಗಲಿದೆ. ಆಯಾ ಪ್ರದೇಶಕ್ಕೆ ಅನುಗುಣವಾಗಿ ಅಧಿಕ ಲಾಭ ತರುವ ಬೆಳೆಗಳನ್ನು ಆಯ್ಕೆ ಮಾಡಿಕೊಳ್ಳುವ ಕುರಿತು ನೆರವಾಗಲು ರಾಜ್ಯಮಟ್ಟದ ತಂತ್ರಜ್ಞರ ಸಮಿತಿಯನ್ನು ಸರ್ಕಾರ ರಚಿಸಿದೆ ಎಂದು ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

<><><>

**ಉತ್ತಮ ದರ್ಜೆಯ ನಿರ್ವಹಣೆಗಾಗಿ ಮಂತ್ರಾ**ಲಯದಲ್ಲಿರುವ ಕರ್ನಾಟಕ ವಸತಿ ಗೃಹಗಳ ಕಟ್ಟಡದ ನಿರ್ವಹಣೆಯ ಉಸ್ತುವಾರಿಯನ್ನು ಪ್ರವಾಸೋದ್ಯಮ ಇಲಾಖೆಗೆ ವಹಿಸುವ ಬಗ್ಗೆ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ ಅವರೊಂದಿಗೆ ಚರ್ಚಿಸುವುದಾಗಿ ಸಾರಿಗೆ ಮತ್ತು ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧಾರ್ಮಿಕ ದತ್ತಿ ಇಲಾಖೆಯಿಂದ ಮಂತ್ರಾಲಯದಲ್ಲಿ ನಿರ್ಮಿಸಿರುವ ಕರ್ನಾಟಕ ರಾಜ್ಯದ ವಸತಿ ಗೃಹದಲ್ಲಿ ಒಟ್ಟು 50 ಕೋಣೆಗಳಿವೆ. ಇವುಗಳನ್ನು ಕರ್ನಾಟಕದಿಂದ ಬರುವ ಭಕ್ತರಿಗೆ ಮೀಸಲಿರಿಸಲಾಗಿದೆ. ಇವುಗಳ ಪೈಕಿ 30 ಕೋಣೆಗಳನ್ನು ಆನಲೈನ್ ಮೂಲಕ ಹಾಗೂ ಇನ್ನುಳಿದ 20 ಕೋಣೆಗಳನ್ನು ನೇರವಾಗಿ ಹಣ ಪಾವತಿಸಿ ಬುಕ್ಕಿಂಗ್ ಮಾಡುವ ವ್ಯವಸ್ಥೆಗೆ ಕ್ರಮ ವಹಿಸುವುದಾಗಿ ಹೇಳಿದರು.

<><><>

**ದೇಶದ ಇಂಧನ ಪರಿವರ್ತನೆ ಸುಸ್ಥಿರ ಮಾರ್ಗದಲ್ಲಿ** ಸಾಗಿದ್ದು, ಎಲ್ಲ ನಗರಗಳು, ನಾಗರಿಕರು ಹಾಗೂ ರೈತರನ್ನು ಒಳಗೊಂಡಂತೆ ವೇಗವಾಗಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ಹಲವಾರು ವಿನೂತನ ಯೋಜನೆಗಳನ್ನು ಜಾರಿಗೊಳಿಸಿದೆ. ಮರುಬಳಕೆ ಇಂಧನ ವಲಯದಲ್ಲಿ ಅಪಾರ ಅವಕಾಶಗಳು ನಿರ್ಮಾಣವಾಗಿವೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಮುಂಬೈನಲ್ಲಿ ನಿನ್ನೆ ನಡೆದ ಐ.ವಿ.ಸಿ.ಎ ಇಂಧನ ಮರುಬಳಕೆ ಶೃಂಗಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಳೆದ ಕೆಲವು ವರ್ಷಗಳಿಂದ ದೇಶದ ಪವನ ಶಕ್ತಿಯ ಪ್ರಮಾಣ 140ರಷ್ಟು ಏರಿಕೆಯಾಗಿದೆ. ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್ ಯೋಜನೆಗೆ, ಕೇಂದ್ರ ಸರ್ಕಾರ 20 ಸಾವಿರ ಕೋಟಿ ರೂಪಾಯಿ ನೆರವು ನೀಡಿದ್ದು, ಹಸಿರು ಹೈಡ್ರೋಜನ್ ಉತ್ಪಾದನೆ ಮತ್ತು ರಫ್ತು ವಲಯದಲ್ಲಿ ಭಾರತವನ್ನು ಜಾಗತಿಕ ಕೇಂದ್ರವನ್ನಾಗಿಸುವ ಗುರಿ ಹೊಂದಲಾಗಿದೆ. ಹೈಡ್ರೋಜನ್ ಆಧಾರಿತ ಭಾರದ ವಾಹನಗಳ ಪರೀಕ್ಷಾರ್ಥ ಪ್ರಯೋಗ ಈಗಾಗಲೇ ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಉಕ್ಕು, ರಸಗೊಬ್ಬರ ಸೇರಿದಂತೆ ಹಲವು ವಲಯಗಳಿಗೆ ಅತಿ ಹೆಚ್ಚಿನ ಲಾಭವಾಗಲಿದೆ ಎಂದು ತಿಳಿಸಿದರು.

<><><>

**ಪ್ರಧಾನಮಂತ್ರಿ ಉಷಾ ಯೋಜನೆ ಅಡಿ,** ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸೂಕ್ಷ್ಮ ಜೀವಶಾಸ್ತ್ರ ಹಾಗೂ ಜೈವಿಕ ತಂತ್ರಜ್ಞಾನ ಸ್ನಾತಕೋತ್ತರ ಅಧ್ಯಯನ ಕೇಂದ್ರ ಆಯೋಜಿಸಿರುವ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ಎ.ಎಂ. ಖಾನ್ ಚಾಲನೆ ನೀಡಿದರು. ದಿಕ್ಸೂಚಿ ಭಾಷಣ ಮಾಡಿದ ಬೆಂಗಳೂರಿನ ಬಯೋಕಾನ್ ಅಕಾದೆಮಿ ಉಪಾಧ್ಯಕ್ಷ ಪ್ರೊಫೆಸರ್ ಎಸ್.ಎಸ್.ಈಶ್ವರನ್ ಶೈಕ್ಷಣಿಕ ಸಂಶೋಧನೆಗಳು ಕೈಗಾರಿಕಾ ಕ್ಷೇತ್ರದ ಅನ್ವೇಷಣೆಗಳಿಗೆ ಪೂರಕವಾಗುವಂತೆ, ಸಂಯೋಜಿಸಿ ಸಂಶೋಧನೆ ಕೈಗೊಳ್ಳುವ ಅವಶ್ಯಕತೆ ಇದೆ ಎಂದರು. ಮುಖ್ಯ ಅಥಿತಿಗಳಾಗಿ ಪಾಲ್ಗೊಂಡಿದ್ದ ಮೈಸೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾಕ್ಟರ್ ಎನ್.ಬಿ.ರಾಮಚಂದ್ರ, ಸಮಾಜದ ಅವಶ್ಯಕತೆಗಳಿಗೆ ಅನುಗುಣವಾಗಿ, ಔಷಧ ಮತ್ತು ಜಿನೋಮಿಕ್ ಅಧ್ಯಯನ, ಬಹುಶಿಸ್ತೀಯ ಹಾಗೂ ಅಂತರ್‌ಶಿಸ್ತೀಯ ಸಂಶೋಧನೆಗಳಿಗೆ ಆಕಾರ ಒದಗಿಸಬೇಕು ಎಂದರು. ದೇಶದ ವಿವಿಧ ಪ್ರತಿಷ್ಠಿತ ಸಂಶೋಧನಾ ಸಂಸ್ಥೆಗಳಿಂದ 300ಕ್ಕೂ ಹೆಚ್ಚು ಪ್ರತಿನಿಧಿಗಳು ಜೈವಿಕ ತಂತ್ರಜ್ಞಾನ, ಸೂಕ್ಷ್ಮಾಣು ತಂತ್ರಜ್ಞಾನ, ನ್ಯಾನೋ ತಂತ್ರಜ್ಞಾನ –ಎನ್.ಸಿ.ಬಿ.ಎನ್.ಎಂ. ವಿಚಾರ ಸಂಕಿರಣದಲ್ಲಿ ಪಾಲ್ಗೊಂಡಿದ್ದು, ಇಂದು ಸಮಾರೋಪಗೊಳ್ಳಲಿದೆ.

<><><>

**ಇಂದು ವಿಶ್ವ ಉರಗಗಳ ದಿನ. "ಹಾವುಗಳನ್ನು ಗೌರವಿಸಿ, ಗಾಬರಿಪಡಬೇಡಿ; ನಿಸರ್ಗದ ಮೌನ ರಕ್ಷಕರನ್ನು ಸಂರಕ್ಷಿಸಿ"** ಎಂಬ ಧ್ಯೇಯದೊಂದಿಗೆ, ಇಂದು ವಿಶ್ವ ಉರಗಗಳ ದಿನಾಚರಣೆ. ಹಾವುಗಳು ಪರಿಸರಕ್ಕೆ ಹಾಗೂ ರೈತನ ಮಿತ್ರನಾಗಿ ನೀಡುವ ಕೊಡುಗೆ ಗಣನೀಯ. ಆಹಾರ ಸರಪಳಿಯ ಪ್ರಮುಖ ಕೊಂಡಿಯಾದ, ಹಾವುಗಳ ಕುರಿತು ಜನಜಾಗೃತಿ ಮೂಡಿಸಲು ಈ ದಿನ ಮೀಸಲು. ಅರಣ್ಯ ಇಲಾಖೆಯ ವನ್ಯಜೀವಿ ಸಂರಕ್ಷಣಾ ವಿಭಾಗದಿಂದ, ಹಾವುಗಳ ದಿನವನ್ನು ಇಂದು ರಾಜ್ಯದ ವಿವಿಧೆಡೆ, ಆಯೋಜಿಸಲಾಗಿದೆ. ತನ್ನಿಮಿತ್ತ ವಿಶೇಷ ಉಪನ್ಯಾಸ ಹಾಗೂ ಜಾಥಾಗಳನ್ನು ಏರ್ಪಡಿಸಲಾಗಿದೆ.

<><><>

**ಈಗ ಪ್ರಕಟಣೆ. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು.**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

<><><>

**ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯ**ಕ್ರಮ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 27ರ ಭಾನುವಾರದಂದು ದೇಶ–ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ 124ನೇ ಆವೃತ್ತಿಯಾಗಿದೆ. ಕಾರ್ಯಕ್ರಮಕ್ಕೆ ನಿಮ್ಮ ಅಗತ್ಯ, ಸಲಹೆ, ಅಭಿಪ್ರಾಯಗಳನ್ನು 1800–11–7800 ಗೆ ಕರೆ ಮಾಡಬಹುದು. ಇಲ್ಲವೇ ನಮೋ ಆ್ಯಪ್ ಅಥವಾ ಮೈ ಗೌವ್ ಡಾಟ್ ಇನ್ ವೇದಿಕೆಯ ಮೂಲಕ ಹಂಚಿಕೊಳ್ಳಬಹುದು.

<><><>

**ಆತ್ಮ ನಿರ್ಭರ ಭಾರತ;** ಪ್ರಧಾನಮಂತ್ರಿಗಳ, ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ, ನಿಯಮಬದ್ಧಗೊಳಿಸುವಿಕೆ ಯೋಜನೆ ಅಡಿ, ಧಾರವಾಡ ಜಿಲ್ಲೆಯಲ್ಲಿ, 20 ಜನ, ಪಿ.ಎಂ.ಎಫ್.ಎಂ.ಇ ಯೋಜನೆಯ, ಸಂಪನ್ಮೂಲ ವ್ಯಕ್ತಿಗಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಈ ಸಂಪನ್ಮೂಲ ವ್ಯಕ್ತಿಗಳ ಸಹಕಾರದಿಂದ ಹುಬ್ಬಳ್ಳಿಯಲ್ಲಿ ಗಾಣದ ಎಣ್ಣೆ ತಯಾರಿಕೆ ಘಟಕವನ್ನು ಆರಂಭಿಸಿರುವ ಪಿ.ಎಂ.ಎಫ್.ಎಂ.ಇ ಫಲಾನುಭವಿ ಸಂತೋ ’ ಕಬ್ಬೂರ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನುಭವ ಹಂಚಿಕೊಂಡಿದ್ದಾರೆ.

**ಧ್ವನಿ– ಸಂತೋಷ ಕಬ್ಬೂರ (40 ಸೆಕೆಂದುಗಳು)**

<><><>

**ವಚನ ಪಿತಾಮಹ ಫ.ಗು.ಹಳಕಟ್ಟಿ ಅವರು ಸಂಪಾದಿಸಿ ಪ್ರಕಟಿಸಿದ, ವಚನ ಸಾಹಿತ್ಯ** ಸಾರ ಅಪೂರ್ವ ವಚನಗಳುಳ್ಳ ಒಂದು ಅದ್ಭುತ ಕೃತಿ ಪ್ರತಿ ಮನೆಯಲ್ಲೂ ನಿತ್ಯ ಓದಬೇಕಾದ ಕೃತಿ ಎಂದು, ಹುಬ್ಬಳ್ಳಿ–ಧಾರವಾಡ ಮಹಾಪೌರರಾದ ಜ್ಯೋತಿ ಪಾಟೀಲ ಹೇಳಿದ್ದಾರೆ. ಧಾರವಾಡ ಕೃಷಿ ವಿಶ್ವವಿದ್ಯಾಲಯದ, ಕುಲಪತಿಗಳ ಸಭಾಂಗಣದಲ್ಲಿ ವಿವೇಕ ವೇದಿಕೆ ಹಾಗೂ ವಿಶ್ವವಿದ್ಯಾಲಯದ ಕನ್ನಡ ಸಂಘ ಆಯೋಜಿಸಿದ್ದ ವಚನ ಪಿತಾಮಹ ಫ.ಗು.ಹಳಕಟ್ಟಿ ಸಂಸ್ಮರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಶ್ವವಿದ್ಯಾಲಯದ ಕುಲಸಚಿವ ರಾಮನಗೌಡ ಪಾಟೀಲ ಮಾತನಾಡಿ, ವಿಜಯಪುರದ ಬಿ.ಎಲ್.ಡಿ.ಇ. ಸಂಸ್ಥೆ ಅವರ ಕನಸಿನ ಕೂಸು. ಶ್ರೀ ಸಿದ್ಧೇಶ್ವರ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್ ಫ.ಗು.ಹಳಕಟ್ಟಿ ಅವರ ದೂರದೃಷ್ಟಿಯ ಫಲ ಎಂದರು.

<><><>